ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಮೂಲಸೌಕರ್ಯಗಳ ಕೊರತೆ ಹಾಗೂ ಉಪಾಧ್ಯಾಯರುಗಳ ಕೊರತೆ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-

83 (87) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜು ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಹಾಗೂ ಉಪಾಧ್ಯಾಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವರ್ಷದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಗಣನೀಯವಾಗಿ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)